## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀಮತಿ ಚೌಡಮ್ಮ, ಅಧ್ಯಕ್ಷರು, ಬಿಸ್ತುವಳ್ಳಿ ಗ್ರಾಮ ಪಂಚಾಯತಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 48(4) ರನ್ವಯ ಕ್ರಮ ಜರುಗಿಸುವ ಬಗ್ಗೆ.

ಓದಲಾಗಿದೆ:

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ ದಾವಣಗೆರೆ ಇವರ ಪತ್ರ ಸಂಖ್ಯೆ:ಜಿಪಂದಾಆ(2):ಗ್ರಾಪಂ:ಸಿಆರ್:49/2017-18, ದಿನಾಂಕ:04-10-2017.
2) ಇದೇ ಸಮಸಂಖ್ಯೆಯ ಕಾರಣ ಕೇಳುವ ನೋಟಿಸ್ ದಿನಾಂಕ:04-11-2017.
3) ಶ್ರೀಮತಿ ಚೌಡಮ್ಮ, ಅಧ್ಯಕ್ಷರು, ಬಿಸ್ತುವಳ್ಳಿ ಗ್ರಾಮ ಪಂಚಾಯತಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರ ಲಿಖಿತ ಹೇಳಿಕೆ ದಿನಾಂಕ:23-11-2017 ಮತ್ತು 20-01-2018.
4) ಸರ್ಕಾರದ ಸಮಸಂಖ್ಯೆಯ ವಿಚಾರಣಾ ನೋಟೀಸ್, ದಿನಾಂಕ:22-12-2017.

ಪ್ರಸ್ತಾವನೆ:

ಮೇಲೆ ಓದಲಾದ (1) ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ ದಾವಣಗೆರೆ ರವರು ಜಗಳೂರು ತಾಲ್ಲೂಕು ಬಿಸ್ತುವಳ್ಳಿ ಗ್ರಾಮ ಪಂಚಾಯತಿಯಲ್ಲಿ 2016-17ನೇ ಸಾಲಿನಲ್ಲಿ ಬಿಡುಗಡೆಯಾದ 14ನೇ ಹಣಕಾಸು ಯೋಜನೆಯ ಅನುದಾನದ ಬಗ್ಗೆ ಮುಖ್ಯ ಲೆಕ್ಕಾಧಿಕಾರಿಗಳು ಆಂತರಿಕ ಲೆಕ್ಕ ತಪಾಸಣೆ ನಡೆಸಿ ವರದಿ ಸಲ್ಲಿಸಿರುತ್ತಾರೆ. ಸದರಿ ವರದಿಯಲ್ಲಿ-

1. ಪೂಜ ಎಂಟರ್‌ಪ್ರೈಸಸ್, ಜಗಳೂರು ಇವರಿಂದ ರೂ.7,83,530/-ಗಳಿಗೆ ನೀರು ಪೂರೈಕೆ ಹಾಗೂ ವಿದ್ಯುತ್ ಸಲಕರಣೆ ಸಾಮಾಗ್ರಿಗಳ ಖರೀದಿ.
2. ಶ್ರೀ ಕರಿಬಸವೇಶ್ವರ ಎಲೆಕ್ಟ್ರಿಕಲ್ಸ್ ಜಗಳೂರು ಇವರಿಂದ ರೂ.3,29,977/-ಗಳಿಗೆ ನೀರು ಪೂರೈಕೆ ಹಾಗೂ ವಿದ್ಯುತ್ ಸಲಕರಣೆ ಸಾಮಾಗ್ರಿಗಳ ಖರೀದಿ.
3. ಸೊಳ್ಳೆ ಔಷಧಿ ಖರೀದಿ ವೆಚ್ಚ ರೂ.46,600/-
4. ಚರಂಡಿ ಸ್ವಚ್ಛತೆ ಬಾಬ್ತು ರೂ.1,26,509/-
5. ಕುಡಿಯುವ ನೀರಿನ ಪೈಪ್ ಲೈನ್ ರಿಪೇರಿ ರೂ.18,500/-
6. ಟ್ಯಾಂಕರ್ ಮುಖಾಂತರ ನೀರು ಸರಬರಾಜು ರೂ.76,000/-
7. ವಿವಿಧ ಸಾಮಾಗ್ರಿ ಖರೀದಿ ರೂ.1,26,658/-
8. ಕಛೇರಿ ದೂರವಾಣಿ ವೆಚ್ಚ ರೂ.13,217/-

ಈ ಮೇಲ್ಕಂಡ ವೆಚ್ಚಕ್ಕೆ ಕ್ರಿಯಾಯೋಜನೆ ತಯಾರಿಸದೇ, ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆಯದೇ, ದರಪಟ್ಟಿ ಕರೆಯದೆ ಹಾಗೂ ಗ್ರಾಮ ಪಂಚಾಯತಿ ಸಾಮಾನ್ಯ ಸಭೆಯಲ್ಲಿ ಮಂಡಿಸಿ ಅನುಮೋದನೆ ಪಡೆಯದೇ ಖರ್ಚು ಮಾಡಿದ್ದು, ಸರ್ಕಾರದ ಹಣ ದುರುಪಯೋಗಕ್ಕೆ ಶ್ರೀಮತಿ ಚೌಡಮ್ಮ, ಅಧ್ಯಕ್ಷರು, ಬಿಸ್ತುವಳ್ಳಿ ಗ್ರಾಮ ಪಂಚಾಯತಿ ಇವರು ಪರೋಕ್ಷವಾಗಿ ಸಹಕರಿಸಿರುವುದು ಕಂಡುಬರುತ್ತದೆ.

ಆದ್ದರಿಂದ ಶ್ರೀಮತಿ ಚೌಡಮ್ಮ, ಅಧ್ಯಕ್ಷರು, ಬಿಸ್ತುವಳ್ಳಿ ಗ್ರಾಮ ಪಂಚಾಯತಿ ಇವರು ಜವಾಬ್ದಾರರಾಗಿರುವುದರಿಂದ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ಮತ್ತು 48(4) ಅಡಿ ಕ್ರಮ ಜರುಗಿಸುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (2) ರಲ್ಲಿ ಶ್ರೀಮತಿ ಚೌಡಮ್ಮ, ಅಧ್ಯಕ್ಷರು, ಬಿಸ್ತುವಳ್ಳಿ ಗ್ರಾಮ ಪಂಚಾಯತಿ ಇವರಿಗೆ ಕಾರಣ ಕೇಳುವ ನೋಟೀಸು ಜಾರಿ ಮಾಡಿ ಅವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ಅವರ ಸಮಜಾಯಿಷಿ ಕೇಳಲಾಗಿತ್ತು.

2..

ಅದರಂತೆ ಮೇಲೆ ಓದಲಾದ (3) ರಲ್ಲಿ ಶ್ರೀಮತಿ ಚೌಡಮ್ಮ, ಅಧ್ಯಕ್ಷರು, ಬಿಸ್ತುವಳ್ಳಿ ಗ್ರಾಮ ಪಂಚಾಯತಿ ಇವರು 2016-17ನೇ ಸಾಲಿನಲ್ಲಿ 14ನೇ ಹಣಕಾಸು ಯೋಜನೆಯ ಅನುಷ್ಠಾನದಲ್ಲಿ ನಾನು ಯಾವುದೇ ರೀತಿಯ ನನ್ನ ವ್ಯಾಪ್ತಿಗೆ ಒಳಪಟ್ಟಂತೆ ಮಾರ್ಗಸೂಚಿಗಳನ್ನು ಉಲ್ಲಂಘಿಸಿರುವುದಿಲ್ಲ. ದಿ:04-10-2017 ರಂದು ಬಿಸ್ತುವಳ್ಳಿ ಗ್ರಾಮ ಪಂಚಾಯತಿಯಲ್ಲಿ ಮುಖ್ಯ ಕಾರ್ಯನಿರ್ವಾಹಕ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯತಿ ದಾವಣಗೆರೆ ಇವರು ನೀಡಿದಂತಹ ವರದಿಯಲ್ಲೂ ಸಹ ಅಧ್ಯಕ್ಷಳಾದ ನಾನು ಯಾವುದೇ ಕರ್ತವ್ಯಲೋಪ ಎಸಗಿರುವುದಿಲ್ಲ. ಸದರಿ ವಿಚಾರವಾಗಿ ನನ್ನ ಮೇಲೆ ಈಗಾಗಲೇ ಜಗಳೂರು ಪೋಲಿಸ್ ಠಾಣೆಯಲ್ಲಿ ದೂರು ದಾಖಲಾಗಿದ್ದು, ಠಾಣಾ ಗುನ್ನ ನಂ-264/2017 ದಾಖಲಾಗಿರುತ್ತದೆ. ಸದರಿ ಕೇಸ್ ಮಾನ್ಯ ಸಿವಿಲ್ & ಜೆ.ಎಮ್.ಎಫ್.ಸಿ ನ್ಯಾಯಾಲಯದಲ್ಲಿ ನಾನು ಜಾಮೀನು ಕೋರಿ ಅರ್ಜಿಯನ್ನು ಸಲ್ಲಿಸಿದ್ದೇನೆ. ಅನಾವಶ್ಯಕವಾಗಿ ಅಧ್ಯಕ್ಷರ ವ್ಯಾಪ್ತಿ ಇಲ್ಲದ ನ್ಯೂನತೆಗಳನ್ನು ನನ್ನ ಮೇಲೆ ಆಪಾದನೆ ಮಾಡಿರುವುದು ಸರಿಯಾದ ಕ್ರಮವಲ್ಲ. ನಾನು ಅತಿ ಬಡ ಬಡತನದ ಕುಟುಂಬದ ಹಿನ್ನೆಲೆಯಿಂದ ಬಂದು, ಅವಿದ್ಯಾವಂತಳಾಗಿರುತ್ತೇನೆ. ಕಾರ್ಯದರ್ಶಿಯವರ ಆಡಳಿತ ನಿರ್ವಹಣೆಯಲ್ಲಿ ಮಾಡಿದ ಲೋಪದೋಷದಿಂದಾಗಿ, ಹಣದುರುಪಯೋಗದ ಆಪಾದನೆಯನ್ನು ಅನಾವಶ್ಯಕವಾಗಿ ನನ್ನ ಮೇಲು ಸಹ ಮಾಡಲಾಗಿರುತ್ತದೆ. ನಾನು ಘನ ನ್ಯಾಯಾಲಯದಲ್ಲಿ ವಿಚಾರಣೆಯನ್ನು ಎದುರಿಸಲು ಸಿದ್ಧಳಿದ್ದೇನೆ ಹಾಗೂ ಪಂಚಾಯತ್ ರಾಜ್ ಇಲಾಖೆಯ ಯಾವುದೇ ವಿಚಾರಣೆಗೂ ಸಹ ಬದ್ಧಳಾಗಿರುತ್ತೇನೆ ಎಂದು ಹೇಳಿಕೆ ನೀಡಿರುತ್ತಾರೆ.

ಮೇಲೆ ಓದಲಾದ (4) ರನ್ವಯ ಶ್ರೀಮತಿ ಚೌಡಮ್ಮ, ಅಧ್ಯಕ್ಷರು, ಬಿಸ್ತುವಳ್ಳಿ ಗ್ರಾಮ ಪಂಚಾಯತಿ ಇವರನ್ನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಮಾನ್ಯ ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ರವರ ನ್ಯಾಯಾಲಯದಲ್ಲಿ ದಿನಾಂಕ:20-01-2018 ರಂದು ಜರುಗಿದ ವಿಚಾರಣೆಯಲ್ಲಿ ಪಿಡಿಓ, ಬಿಸ್ತುವಳ್ಳಿ ಗ್ರಾಮ ಪಂಚಾಯತಿ, ತಾಲ್ಲೂಕು ಪಂಚಾಯತಿ ಹಾಗೂ ಜಿಲ್ಲಾ ಪಂಚಾಯತಿ ಅಧಿಕಾರಿಗಳು, ಹಾಗೂ ಆಪಾದಿತ ಅಧ್ಯಕ್ಷರು ಹಾಜರಿರುತ್ತಾರೆ.

ಸರ್ಕಾರವು ಪ್ರಕರಣದಲ್ಲಿ ಲಭ್ಯವಿರುವ ಎಲ್ಲಾ ದಾಖಲಾತಿಗಳನ್ನು ಪರಿಶೀಲಿಸಲಾಗಿ, ಆಪಾದಿತ ಅಧ್ಯಕ್ಷರ ಮೇಲಿನ ಆಪಾದನೆ ಸಾಬೀತಾಗಿರುವ ಹಿನ್ನೆಲೆಯಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 48(4) ರನ್ವಯ ಬಿಸ್ತುವಳ್ಳಿ ಗ್ರಾಮ ಪಂಚಾಯತಿಯ ಅಧ್ಯಕ್ಷ ಸ್ಥಾನದಿಂದ ವಜಾಗೊಳಿಸಲು ಸರ್ಕಾರವು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 467 ಗ್ರಾಪಂಅ 2017 ಬೆಂಗಳೂರು, ದಿನಾಂಕ:09-04-2018.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಶ್ರೀಮತಿ ಚೌಡಮ್ಮ, ಅಧ್ಯಕ್ಷರು, ಬಿಸ್ತುವಳ್ಳಿ ಗ್ರಾಮ ಪಂಚಾಯತಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರ ಮೇಲಿನ ಆಪಾದನೆ ಸಾಬೀತಾಗಿರುವ ಹಿನ್ನೆಲೆಯಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 48(4) ರನ್ವಯ ಬಿಸ್ತುವಳ್ಳಿ ಗ್ರಾಮ ಪಂಚಾಯತಿಯ ಅಧ್ಯಕ್ಷ ಸ್ಥಾನದಿಂದ ವಜಾಗೊಳಿಸಿ ತಕ್ಷಣದಿಂದ ಜಾರಿಗೆ ಬರುವಂತೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಮುಬಾರಕ್ ಅಹ್ಮದ್)**
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿ:**

1) ಜಿಲ್ಲಾಧಿಕಾರಿಗಳು, ದಾವಣಗೆರೆ ಜಿಲ್ಲೆ.

2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ದಾವಣಗೆರೆ, ದಾವಣಗೆರೆ ಜಿಲ್ಲೆ.
3) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಜಗಳೂರು, ದಾವಣಗೆರೆ ಜಿಲ್ಲೆ.
4) ಶ್ರೀಮತಿ ಚೌಡಮ್ಮ, ಅಧ್ಯಕ್ಷರು, ಬಿಸ್ತುವಳ್ಳಿ ಗ್ರಾಮ ಪಂಚಾಯತಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ.
5) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಬಿಸ್ತುವಳ್ಳಿ ಗ್ರಾಮ ಪಂಚಾಯತಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ.
6) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.
7) ಗಣಕ ಕೋಶ.

<u>ಪ್ರತಿಯನ್ನು ಮಾಹಿತಿಗಾಗಿ:</u>

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.